ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ. ಇಡಿ/ಕೆಇಎ/ಆಡಳಿತ/ಸಿ.ಆರ್ 15/2022-23 ದಿನಾಂಕ. 20.10.2023

# ಸುತ್ತೋಲೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ. 28.10.2023 ಮತ್ತು 29.10.2023ರಂದು ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಮತ್ತು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇರ ನೇಮಕಾತಿಗಾಗಿ ಪರೀಕ್ಷೆಗಳನ್ನು ನಡೆಸುತ್ತದೆ. ಸದರಿ ಪರೀಕ್ಷೆಗಳಿಗೆ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಈಗಾಗಲೇ ಲಿಂಕ್‌ಅನ್ನು ಪ್ರಕಟಿಸಲಾಗಿದ್ದು, ಅಭ್ಯರ್ಥಿಗಳು ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡಿರುತ್ತಾರೆ. ಕೆಲವು ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿರುವ ಕಾರಣ ಒಂದಕ್ಕಿಂತ ಹೆಚ್ಚು ಪ್ರವೇಶ ಪತ್ರಗಳು ಬಿಡುಗಡೆಯಾಗಿರುತ್ತವೆ. ದಿನಾಂಕ. 28.10.2023ರಂದು ಒಂದು ಜಿಲ್ಲೆಯಲ್ಲಿ ಮತ್ತು 29.10.2023ರಂದು ಬೇರೆ ಜಿಲ್ಲೆಯಲ್ಲಿ ಪರೀಕ್ಷಾ ಕೇಂದ್ರವಿದ್ದಲ್ಲಿ, 28.10.2023ರಂದು ಹಂಚಿಕೆಯಾಗಿರುವ ಜಿಲ್ಲೆಯಲ್ಲೇ ಮತ್ತು 29.10.2023ರಂದು ಹಂಚಿಕೆಯಾಗಿರುವ ಬೇರೆ ಜಿಲ್ಲೆಯಲ್ಲೇ ಪರೀಕ್ಷೆಗೆ ಹಾಜರಾಗತಕ್ಕದ್ದು.

ಆದರೆ ಕೆಲವು ಅಭ್ಯರ್ಥಿಗಳಿಗೆ ಒಂದೇ ದಿನ ಒಂದೇ ಅವಧಿಯಲ್ಲಿ ಎರಡು ಪ್ರತ್ಯೇಕ ಜಿಲ್ಲೆಗಳಲ್ಲಿ ಅಥವಾ ಪ್ರತ್ಯೇಕ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಯನ್ನು ಬರೆಯಲು ಪ್ರವೇಶ ಪತ್ರ ಡೌನ್‌ಲೋಡ್ ಆಗಿರುತ್ತದೆ. ಇಂತಹ ಅಭ್ಯರ್ಥಿಗಳು ಮಾತ್ರ ಯಾವುದಾದರು ಒಂದು ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಯನ್ನು ಬರೆಯತಕ್ಕದ್ದು. ಪರೀಕ್ಷಾ ದಿನದಂದು ಎರಡೂ ಪ್ರವೇಶ ಪತ್ರಗಳನ್ನು ಕೊಠಡಿಯ ಮೇಲ್ವಿಚಾರಕರಿಗೆ ಸಲ್ಲಿಸಬೇಕು.

ಪ್ರಸ್ತುತ ದಿನಾಂಕ. 28.10.2023 ಮತ್ತು 29.10.2023ರಂದು ನಡೆಸುವ ಪರೀಕ್ಷೆಗಳಿಗೆ ಮಾತ್ರ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ಲಿಂಕ್‌ಅನ್ನು ಬಿಡುಗಡೆ ಮಾಡಲಾಗಿದೆ. ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಸಂಸ್ಥೆಗಳಲ್ಲಿ ನೇರ ನೇಮಕಾತಿ ಸಂಬಂಧ ಉಳಿದ ಪರೀಕ್ಷೆಗಳನ್ನು ದಿನಾಂಕ. 18.11.2023 ರಿಂದ 25.11.2023ರವರೆಗೆ ನಡೆಸಲಾಗುವುದೆಂದು ಈಗಾಗಲೇ ತಾತ್ಕಾಲಿಕ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ಆದ್ದರಿಂದ ದಿನಾಂಕ. 18.11.2023 ರಿಂದ 25.11.2023ರವರೆಗೆ ನಡೆಯಲಿರುವ ಪರೀಕ್ಷೆಗಳಿಗೆ ನಂತರದ ದಿನಗಳಲ್ಲಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಲು ಕೆಇಎ ವೆಬ್‌ಸೈಟಿನಲ್ಲಿ ಲಿಂಕ್‌ಅನ್ನು ನೀಡಲಾಗುವುದು.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in